(6)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವಿ. ಸಂಕನೂರ ರವರು ನಿಯಮ 330 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಸರ್ಕಾರದ ಉತ್ತರ:**

**ವಿಷಯ:** ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಸಿಇಟಿ ಪರೀಕ್ಷೆಯ ಮೂಲಕ ಸೀಟು ಹಂಚಿಕೆ ಮಾಡುವ ಕುರಿತು ದಿನಾಂಕ: 18.04.2023ರಂದು ಸರ್ಕಾರ ಪ್ರಕಟಣೆ ನೀಡಿರುವುದರಿಂದ ಪಿ.ಯು ವಿಜ್ಞಾನ ವಿದ್ಯಾರ್ಥಿಗಳಿಗೆ ಪೂರ್ವ ಸಿದ್ಧತೆ ಮಾಡಿಕೊಳ್ಳಲು ಸರಿಯಾದ ಕಾಲಾವಕಾಶ ಸಿಗದೇ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಅರ್ಹ ಅಂಕಗಳನ್ನು ಪಡೆಯದೇ ಇರುವ ಹಿನ್ನಲೆಯಲ್ಲಿ ಸೀಟು ಹಂಚಿಕೆಯನ್ನು 2022-23ನೇ ಶೈಕ್ಷಣಿಕ ವರ್ಷದಲ್ಲಿ ಅನುಸರಿಸಿದ ನಿಯಮಾವಳಿಗಳನ್ನು ಪಾಲಿಸುವಂತೆ ವಿಷಯವನ್ನು ಪ್ರಸ್ತಾಪಿಸುವುದು.

***

ಇಂಡಿಯನ್ ನರ್ಸಿಂಗ್ ಕೌನ್ಸಿಲ್‌ನ ಅಧಿಸೂಚನೆ-5/2023ರ ಸಂಖ್ಯೆ: F.No. 22-10/NEET/2018-19-INC, ದಿನಾಂಕ: 06.04.2023ರಲ್ಲಿ ಬಿ.ಎಸ್ಸಿ (ನರ್ಸಿಂಗ್) ಕೋರ್ಸಿಗೆ ಸಂಬಂಧಿಸಿದಂತೆ Revised Regulations and Curriculum for B.Sc. (Nursing) Program, Regulations, 2020ರಲ್ಲಿ ಬಿ.ಎಸ್ಸಿ. (ನರ್ಸಿಂಗ್) program ಗಳ ಶೈಕ್ಷಣಿಕ ಅವಧಿಯ ಪ್ರಾರಂಭವು 1ನೇ ಆಗಸ್ಟ್ 2023 ಹಾಗೂ ಪ್ರವೇಶಾತಿ ಕೊನೆಯ ದಿನಾಂಕವು 30ನೇ ಸೆಪ್ಟೆಂಬರ್ 2023ರೊಳಗಾಗಿ ಮುಕ್ತಾಯಗೊಳಿಸಲು ಉಪಬಂಧ ಕಲ್ಪಿಸಲಾಗಿದೆ. ಬಿ.ಎಸ್ಸಿ (ನರ್ಸಿಂಗ್) ಕೋರ್ಸಿನ ಪ್ರವೇಶಾತಿಗಳನ್ನು 2023-24ನೇ ಸಾಲಿನಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ರಾಜ್ಯ ಸರ್ಕಾರದ ಸಾಮಾನ್ಯ ಪ್ರವೇಶ ಸೆಲ್/ವಿಶ್ವವಿದ್ಯಾಲಯದ ಮುಖಾಂತರ ನಡೆಸಲು ಸೂಚಿಸಲಾಗಿದೆ.

ಈ ಬಗ್ಗೆ ದಿನಾಂಕ: 10.04.2023ರಂದು ನಡೆದ ಸಭೆಯಲ್ಲಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕೆ.ಇ.ಎ) ವೃತ್ತಿಪರ ಕೋರ್ಸುಗಳಾದ ಇಂಜಿನಿಯರಿಂಗ್ / ವಾಸ್ತುಶಿಲ್ಪ ಕೋರ್ಸುಗಳು, ಫಾರ್ಮ್ ಸೈನ್ಸ್ ಅಂದರೆ ಬಿಎಸ್ಸಿ. (ಕೃಷಿ), ಬಿ.ಎಸ್.ಸಿ. (ರೇಷ್ಮೆ ಕೃಷಿ), ಬಿ.ಎಸ್.ಸಿ (ತೋಟಗಾರಿಕೆ), ಬಿ.ಎಸ್.ಸಿ (ಅರಣ್ಯ), ಬಿ.ಎಸ್.ಸಿ. ಬಿ.ಎಸ್.ಕೆ (ಆಹಾರ ವಿಜ್ಞಾನ), ಬಿಟೆಕ್ (ಡೈರಿ ಟೆಕ್), ಬಿಎಫ್‌ಎಸ್ಸಿ (ಫಿಶರೀಸ್), ಬಿ.ಟೆಕ್ (ಫುಡ್ ಸೈನ್ಸ್ & ಟೆಕ್), ಅಗ್ರಿ ಬಯೋ ಟೆಕ್, ಬಿಎಚ್‌ಎಸ್ಸಿ (ಹೋಮ್ ಸೈನ್ಸ್), ಬಿ.ಟೆಕ್ (ಅಗ್ರಿ) ), B.Sc. (ಅಗ್ರಿ ಮಾರ್ಕೆಟಿಂಗ್ & ಕೋ-ಆಪ್), ಬಿ-ಫಾರ್ಮಾ, ಫಾರ್ಮಾ-ಡಿ ಕೋರ್ಸುಗಳಿಗೆ ಪ್ರವೇಶ ಪರೀಕ್ಷೆ ನಡೆಸುವುದಕ್ಕೆ ಮತ್ತು ಪ್ರವೇಶ ನೀಡುವುದಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳ ಮೆರಿಟ್ ಅನ್ನು ನಿರ್ಧರಿಸುವ ಕ್ರಮವನ್ನು ವಹಿಸುತ್ತಿದೆ. ಆದುದರಿಂದ, ಬಿ.ಎಸ್ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶ ಪರೀಕ್ಷೆಗಳನ್ನು ಹಾಗೂ ಪ್ರವೇಶ ನೀಡುವುದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದಲೇ ನಡೆಸುವುದು ಸೂಕ್ತವೆಂದು ನಿರ್ಣಯಿಸಿದೆ.

ಅದರಂತೆ, ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 51 ಆರ್‌ಜಿಯು 2023, ದಿ: 13.04.2023ರಲ್ಲಿ ಬಿ.ಎಸ್ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶ ಪರೀಕ್ಷೆಯನ್ನು ಹಾಗೂ ಸದರಿ ಕೋರ್ಸುಗಳ ಸೀಟು ಹಂಚಿಕೆ ಕ್ರಮವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದಲೇ ನಡೆಸುವಂತೆ ಆದೇಶಿಸಿದ್ದು, ಬಿ.ಎಸ್ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶ ಪರೀಕ್ಷೆ ಮತ್ತು ಸೀಟು ಹಂಚಿಕೆ ಕ್ರಮಗಳನ್ನು ಐ.ಎನ್.ಸಿ. ಮತ್ತು ಆರ್‌ಜಿಯುಹೆಚ್‌ಎಸ್‌ನ ಮಾರ್ಗಸೂಚಿಗಳನ್ನು ಅನುಸರಿಸಿ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನರ್ಸಿಂಗ್ ಕೋರ್ಸುಗಳ ಸೀಟು ಹಂಚಿಕೆಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಿರುತ್ತದೆ. ರಾಜ್ಯದಲ್ಲಿ ಒಟ್ಟು 33,000 ನರ್ಸಿಂಗ್ ಸೀಟುಗಳು ಲಭ್ಯವಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಪೈಕಿ ಒಟ್ಟು 1,75,682 ಅಭ್ಯರ್ಥಿಗಳು ನರ್ಸಿಂಗ್ ಸೀಟು ಹಂಚಿಕೆಗೆ ಅರ್ಹತೆಯನ್ನು ಪಡೆದಿರುತ್ತಾರೆ.

ಸಂಖ್ಯೆ:ಎಂಇಡಿ 83 ಆರ್‌ಜಿಯು 2023

(ಡಾ: ಶರಣಪ್ರಕಾಶ ಆರ್. ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು